ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

ಕರ್ನಾಟಕ ವಿಧಾನ ಪರಿಷತ್ತು

ನೂರ ನಲವತ್ತೊಂದನೆಯ ಅಧಿವೇಶನ

ಬುಧವಾರ, ದಿನಾಂಕ : 30 ನೇ ಸೆಪ್ಟೆಂಬರ್, 2020

ಜೋಯಿಡಾ ತಾಲ್ಲೂಕಿನ ಅಭಿವೃದ್ಧಿ ಕಾಮಗಾರಿಗಳಲ್ಲಿ ಅವ್ಯವಹಾರದ ಬಗ್ಗೆ

ಶ್ರೀ ಘೊಟ್ನೇಕರ ಶ್ರೀಕಾಂತ ಲಕ್ಷ್ಮಣ(ಸ್ಥಳೀಯ ಸಂಸ್ಥೆಗಳ ಕ್ಷೇತ್ರ) -

1132 (1202) ಮಾನ್ಯ ಉಪ ಮುಖ್ಯಮಂತ್ರಿಗಳು ಹಾಗೂ ಲೋಕೋಪಯೋಗಿ ಮತ್ತು ಸಮಾಜ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ -

(ಅ) ಕಾರವಾರ ಜಿಲ್ಲೆಯ ಹಳಿಯಾಳ/ಜೋಯಿಡಾ ತಾಲ್ಲೂಕಿನ ವ್ಯಾಪ್ತಿಯಲ್ಲಿ ಬರುವ ಲೋಕೋಪಯೋಗಿ ಇಲಾಖೆಯಿಂದ 2017-18ನೇ ಸಾಲಿನಿಂದ ಇಲ್ಲಿವರೆಗೆ ಬಂದಿರುವ ಅನುದಾನದ ವಿವರ ಶೀರ್ಷಿಕೆವಾರು ನೀಡುವುದು ಹಾಗೂ ಸದರಿ ಅನುದಾನಕ್ಕೆ ಕೈಗೊಂಡ ಕಾಮಗಾರಿಗಳು ಯಾವುವು; (ವಿವರ ಹಾಗೂ ಆಡಿಟ್ ಪ್ರತಿಯೊಂದಿಗೆ ಕಾಮಗಾರಿಯ ಅಂದಾಜು ಪ್ರತಿ, ಬಿಲ್ ಪ್ರತಿ, ಎಂ.ಬಿ. ಪ್ರತಿ ಹಾಗೂ ಕಾಮಗಾರಿಯ ಫೋಟೋ ಸಮೇತ ತಾಲ್ಲೂಕುವಾರು/ ಜಿಲ್ಲಾವಾರು ಮಾಹಿತಿ ನೀಡುವುದು)

(ಆ) ಸದರಿ ಜೋಯಿಡಾ ತಾಲ್ಲೂಕಿನಲ್ಲಿ ಆಗಿರುವ ಕಾಮಗಾರಿಯಲ್ಲಿ ಬಹಳಷ್ಟು ಅವ್ಯವಹಾರಗಳು ಆಗಿರುತ್ತದೆಯೆಂದು ಸಾರ್ವಜನಿಕರು ಪ್ರತಿಭಟನೆ ಮಾಡಿದ್ದು, ಈ ಬಗ್ಗೆ ಸಂಬಂಧಿಸಿದ ಅಧಿಕಾರಿಗಳು ಇಲ್ಲಿಯವರೆಗೆ ಯಾವುದೇ ಕ್ರಮ ಜರುಗಿಸದೇ ನುಣುಚಿಕೊಳ್ಳುವ ಪ್ರವೃತ್ತಿ ತೋರಿಸಿರುವುದರಿಂದ ಸದರಿ ವಿಷಯದಲ್ಲಿ ಸರ್ಕಾರ ಲೋಕಾಯುಕ್ತರಿಂದ ತನಿಖೆ ಮಾಡಿಸುವುದೇ; (ವಿವರ ನೀಡುವುದು)

(ಇ) ಹಳಿಯಾಳ ತಾಲ್ಲೂಕಿನ ಜನಗಾ, ಗರಡೊಳ್ಳಿ, ಭಾಗವತಿ, ಸಾಂಬ್ರಾಣಿ ಮುಂತಾದ ಕಡೆಗೂ ಆಗಿರುವ ಕಾಮಗಾರಿಯಲ್ಲಿ ಬಹಳಷ್ಟು ಅವ್ಯವಹಾರಗಳು ಆಗಿರುತ್ತದೆಯೆಂದು ತಿಳಿದು ಬಂದಿದ್ದು, ಈ ಬಗ್ಗೆ ಸಂಬಂಧಿಸಿದ ಅಧಿಕಾರಿಗಳಿಗೆ ತಿಳಿಸಿದರೂ ಸರಿಯಾದ ರೀತಿಯಲ್ಲಿ ಸ್ಪಂದಿಸದೆ ಸರ್ಕಾರದಿಂದ ಬಂದ ಕೋಟ್ಯಾಂತರ ರೂಪಾಯಿ ಅವ್ಯವಹಾರವಾಗಿರುವ ಬಗ್ಗೆ ಸೂಕ್ತ ತನಿಖೆ ಮಾಡುವರೇ? (ವಿವರ ನೀಡುವುದು)